## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಮಂತ್ರಾಲಯವು 2012-13ನೇ ಸಾಲಿಗೆ ಡಿಆರ್‌ಡಿಎ ಆಡಳಿತ ಯೋಜನೆಯಡಿ ರಾಯಚೂರು ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಿದ ಒಂದನೇ ಕಂತಿನ ಅನುದಾನಕ್ಕನುಗುಣವಾಗಿ ರಾಜ್ಯದ ಪಾಲಿನ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ :
1. ಕೇಂದ್ರ ಸರ್ಕಾರದ- ಪತ್ರ ಸಂಖ್ಯೆ:ಆರ್-17014/01/2012-13 ಡಿಆರ್‌ಡಿಎ(ಎಸ್‌ಎಲ್ ನಂ.10) ದಿನಾಂಕ 21-05-2012.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 2 ಎಸ್‌ಜೆವೈ (ಡಿಆರ್‌ಡಿಎ) 2011, ಬೆಂಗಳೂರು, ದಿನಾಂಕ: 07-06-2012 ಮತ್ತು 17-09-2012.
3. ಸರ್ಕಾರದ ಆದೇಶ ಸಂಖ್ಯೆ :ಗ್ರಾಅಪ 4 ಎಸ್‌ಜೆವೈ (ಡಿಆರ್‌ಡಿಎ) 2012, ಬೆಂಗಳೂರು, ದಿನಾಂಕ: 17-09-2012, 11.10.2012 ಮತ್ತು 26.11.2012.
4. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ : ಆರ್-17014/11/: 2012-13 ಡಿಆರ್‌ಡಿಎ(ಎಸ್‌ಎಲ್ ನಂ.41) ದಿನಾಂಕ 24-08-2012.
5. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ:ಆರ್-17014/11/:2012-13 ಡಿಆರ್‌ಡಿಎ [ಎಸ್‌ಎಲ್ ನಂ.48] ದಿನಾಂಕ 15.11.2012.

-:0:-

**ಪ್ರಸ್ತಾವನೆ:**

ಡಿಆರ್‌ಡಿಎ ಆಡಳಿತ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು 75:25ರ ಅನುಪಾತದಲ್ಲಿ ಭರಿಸುತ್ತವೆ. 2012-13 ನೇ ಸಾಲಿಗೆ ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯವು ರಾಜ್ಯದ 21 ಜಿಲ್ಲಾ ಪಂಚಾಯತಿಗಳಿಗೆ ಡಿಆರ್‌ಡಿಎ ಆಡಳಿತ ಯೋಜನೆಯಡಿ ಓದಲಾಗಿದೆ (1) ಮತ್ತು (4)ರ ಪತ್ರಗಳಲ್ಲಿ ಒಂದನೇ ಕಂತಿನ ಅನುದಾನ ರೂ.7,49,65,000/- ಬಿಡುಗಡೆ ಮಾಡಿದೆ. ಇದಕ್ಕನುಗುಣವಾಗಿ ರಾಜ್ಯ ಸರ್ಕಾರವು ತನ್ನ ಪಾಲಿನ ಒಂದನೇ ಕಂತಿನ ಅನುದಾನ ರೂ.2,49,87,000/-ಗಳನ್ನು ಓದಲಾಗಿದೆ (3)ರ ಆದೇಶಗಳಲ್ಲಿ ಬಿಡುಗಡೆ ಮಾಡಿದೆ.

ಓದಲಾಗಿದೆ (5)ರ ಪತ್ರದಲ್ಲಿ ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯವು 2012-13 ನೇ ಸಾಲಿಗೆ ಒಂದನೇ ಕಂತಿನ ಅನುದಾನವಾಗಿ ರಾಯಚೂರು ಜಿಲ್ಲಾ ಪಂಚಾಯತಿಗೆ ರೂ.31,40,000/- ಗಳನ್ನು ಬಿಡುಗಡೆ ಮಾಡಿದೆ. ಇದಕ್ಕನುಗುಣವಾಗಿ ರಾಜ್ಯದ ಪಾಲಿನ ಒಂದನೇ ಕಂತಿನ ಅನುದಾನವಾಗಿ ರಾಯಚೂರು ಜಿಲ್ಲಾ ಪಂಚಾಯತಿಗೆ ರೂ.10,47,000/-ಗಳನ್ನು ಬಿಡುಗಡೆ ಮಾಡಬೇಕಾಗಿದೆ. ಆದುದರಿಂದ ಈ ಆದೇಶ :

### ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 4 ಎಸ್‌ಜೆವೈ (ಡಿಆರ್‌ಡಿಎ) 2012, ಬೆಂಗಳೂರು, ದಿನಾಂಕ: 06.12.2012.

ರಾಜ್ಯ ಸರ್ಕಾರವು, ಡಿಆರ್‌ಡಿಎ ಆಡಳಿತ ಯೋಜನೆಯಡಿ 2012-13 ನೇ ಸಾಲಿನಲ್ಲಿ ಒಂದನೇ ಕಂತಿನ ಅನುದಾನವಾಗಿ ರಾಯಚೂರು ಜಿಲ್ಲಾ ಪಂಚಾಯತಿಗೆ ರೂ.10,47,000/- ಗಳನ್ನು

(ಹತ್ತು ಲಕ್ಷದ ನಲವತ್ತೇಳು ಸಾವಿರ ರೂಪಾಯಿಗಳು ಮಾತ್ರ) ಕೆಳಕಂಡ ಷರತ್ತುಗೊಳ ಪಟ್ಟು ಬಿಡುಗಡೆ ಮಾಡಲು ಮಂಜೂರಾತಿ ನೀಡಿದೆ.

ರೂ.ಗಳಲ್ಲಿ

| ಕ್ರ ಸಂ | ಜಿಲ್ಲಾ ಪಂಚಾಯತಿಯ ಹೆಸರು | ಜಿ.ಪಂ. ಕೋಡ್ | ಡಿ.ಡಿ.ಓ ಕೋಡ್ | 2012-13 ನೇ ಸಾಲಿನಲ್ಲಿ ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ ಒಂದನೇ ಕಂತಿನ ಅನುದಾನ | ಇದಕ್ಕನುಗುಣವಾಗಿ ರಾಜ್ಯ ಸರ್ಕಾರವು ಬಿಡುಗಡೆ ಮಾಡುತ್ತಿರುವ ಒಂದನೇ ಕಂತಿನ ಅನುದಾನ |
|---|---|---|---|---|---|
| 1 | 2 | 3 | 4 | 5 | 6 |
| 1 | ರಾಯಚೂರು | 420 | **3600ZZ0001** | 31,40,000 | 10,47,000 |

<u>ಷರತ್ತುಗಳು :</u>

ಡಿಆರ್‌ಡಿಎ ಆಡಳಿತ ಯೋಜನೆಯ ಕೈಪಿಡಿಯ ಮಾರ್ಗಸೂಚಿಯಂತೆ ಈ ಆದೇಶದಲ್ಲಿ ಬಿಡುಗಡೆ ಮಾಡಿದ ಅನುದಾನವನ್ನು ಜಿಲ್ಲಾ ಪಂಚಾಯತ್ ಸಿಬ್ಬಂದಿಗಳ ವೇತನ ಹಾಗೂ ಸಾದಿಲ್ವಾರು ವೆಚ್ಚಗಳಿಗೆ ಮಾತ್ರ ಉಪಯೋಗಿಸಲು ಅವಕಾಶವಿದೆ. ಕೇಂದ್ರ ಹಾಗೂ ರಾಜ್ಯದ ಪಾಲಿನ ಅನುದಾನವನ್ನು ಸೇರಿ ವೆಚ್ಚವನ್ನು ಭರಿಸಬೇಕಾಗಿರುವುದರಿಂದ ರಾಜ್ಯದ ಪಾಲಿನ ಅನುದಾನವನ್ನು ವೇತನ ಮತ್ತು ವೇತನೇತರವೆಂದು ವಿಂಗಡಿಸದೆ ಒಟ್ಟಾರೆ ರಾಜ್ಯದ ಪಾಲಿನ ಅನುದಾನವನ್ನು ಖಜಾನೆಯಿಂದ ಡ್ರಾ ಮಾಡಲು ಖಜಾನಾಧಿಕಾರಿಗಳು ಅನುಮತಿ ನೀಡತಕ್ಕದ್ದು.

ಯೋಜನೆಯ ವೆಚ್ಚವನ್ನು ಲೆಕ್ಕ ಶೀರ್ಷಿಕೆ : "2515 ಇತರೆ ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಗಳು 00-196-ಜಿಲ್ಲಾ ಪಂಚಾಯತ್‌ಗಳಿಗೆ ಸಹಾಯ-6-ಜಿಲ್ಲಾ ಪಂಚಾಯತ್-06-ಡಿಆರ್‌ಡಿಎ ಆಡಳಿತಾತ್ಮಕ ವೆಚ್ಚ- (ಕೇಂದ್ರ ಪುರಸ್ಕೃತ ಯೋಜನೆ) 2012-2013 ಲಿಂಕ್ ಕೋಡ್ 2515-00-196-6-06" (ಹೊಸ ಜಿಲ್ಲಾ ಪಂಚಾಯತ್ ಕೋಡ್ 2515-00-101-0-01) ರಡಿ ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ ಎಫ್‌ಡಿ 1 ಜಡ್‌ಪಿಎ 2007 (ಪಿ2) ದಿನಾಂಕ 26-04-2007 ರನ್ವಯ ಜಿಲ್ಲಾ ಪಂಚಾಯತ್ ನಿಧಿ-1ಕ್ಕೆ ಜಮೆ ಮಾಡಿಕೊಂಡು ಆರ್ಥಿಕ ಇಲಾಖೆ (ವೆಚ್ಚ-6) ಯ ಸಂಖ್ಯೆ ಆಇ 172 ವೆಚ್ಚ-6/2011 ದಿನಾಂಕ 30-03-2011 ರ ಸಹಮತಿಯಂತೆ ಪೇಯಿಸ್ ರಸೀದಿಯ ಮೂಲಕ ಜಿಲ್ಲಾ ಪಂಚಾಯತಿ ನಿಧಿಯಿಂದ ಅನುದಾನವನ್ನು ಖಜಾನೆಯಿಂದ ಪಡೆದುಕೊಂಡು ಕಾರ್ಯಕ್ರಮದ ಅನುಷ್ಠಾನಕ್ಕಾಗಿ ತೆರೆದಿರುವ ಬ್ಯಾಂಕ್ ಖಾತೆಗೆ ಜಮೆ ಮಾಡಿಕೊಂಡು ವೆಚ್ಚವನ್ನು ಭರಿಸತಕ್ಕದ್ದು.

ರಾಯಚೂರು ಜಿಲ್ಲಾ ಪಂಚಾಯತಿಯ ಮುಖ್ಯ ಲೆಕ್ಕಾಧಿಕಾರಿಗಳಿಗೆ ಅನುದಾನವನ್ನು ಖಜಾನೆಯಿಂದ ಸೆಳೆಯಲು ಕಾನೂನು ರೀತ್ಯ ಅಧಿಕಾರ ನೀಡಲಾಗಿದೆ.

ಈ ಆದೇಶದಲ್ಲಿ ಬಿಡುಗಡೆ ಮಾಡಿದ ಅನುದಾನದ ಆಂತರಿಕ ಲೆಕ್ಕ ಪರಿಶೋಧನೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮಾಡುವುದು.

ರಾಯಚೂರು ಜಿಲ್ಲಾ ಪಂಚಾಯತಿಯ ಮುಖ್ಯ ಲೆಕ್ಕಾಧಿಕಾರಿಗಳು, ಆಯಾ ತಿಂಗಳ ಪ್ರಗತಿ ವರದಿ ಹಾಗೂ ಹುದ್ದೆವಾರು ವಿವರಗಳನ್ನು ಮುಂದಿನ ತಿಂಗಳ 5ನೇ ತಾರೀಖಿನೊಳಗೆ ನಿರ್ದೇಶಕರು {ಸ್ವಉಲಕಾ} ಹಾಗೂ ಪ.ನಿ.ಸರ್ಕಾರದ ಉಪ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು ಇವರಿಗೆ ತಪ್ಪದೇ ಕಳುಹಿಸುವುದು.

ರಾಯಚೂರು ಜಿಲ್ಲಾ ಪಂಚಾಯತಿಯ ಮುಖ್ಯ ಲೆಕ್ಕಾಧಿಕಾರಿಗಳು ಹಣ ಉಪಯೋಗ ಪ್ರಮಾಣ ಪತ್ರ ಹಾಗೂ ಲೆಕ್ಕ ಪರಿಶೋಧನಾ ವರದಿಗಳನ್ನು, ನಿರ್ದೇಶಕರು {ಸ್ವಉಕಾ} ಹಾಗೂ ಪದ ನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು ಇವರಿಗೆ ತಪ್ಪದೇ ಕಳುಹಿಸುವುದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕರ್ನಾಟಕ ಸರ್ಕಾರ ಇವರ ಸಹಮತಿ ಸಂಖ್ಯೆ:ಗ್ರಾಅಪ 66 ಪಿಬಿಎಸ್ 2012 ದಿನಾಂಕ: 04.12.2012 ರಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

6/12/12

(ಎಂ. ದೀಪ)
ನಿರ್ದೇಶಕರು (ಸ್ವಉಕಾ)
ಹಾಗೂ ಪ.ನಿ. ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ: ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಇವರಿಗೆ ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಲು ಕೋರಲಾಗಿದೆ. (ಎರಡು ಪ್ರತಿಗಳು)

ಪ್ರತಿ:

1. ಪ್ರಧಾನ ಮಹಾಲೇಖಪಾಲರು, ಭಾರತೀಯ ಪರಿಶೋಧನೆ ಮತ್ತು ಲೆಕ್ಕ ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು (ಡಿಅರ್‌ಡಿಎ), ಗ್ರಾಮೀಣಾಭಿವೃದ್ಧಿ ಮಂತ್ರಾಲಯ, ಭಾರತ ಸರ್ಕಾರ, ಸಿ–21, 3ನೇ ಹಂತ, ಸ್ಟೇಟ್ ಎಂಪೋರಿಯ ಬಿಲ್ಡಿಂಗ್, ಬಾಬಾ ಖರಕ್‌ಸಿಂಗ್ ಮಾರ್ಗ, ನವದೆಹಲಿ–110 001.
3. ಶಾಖಾಧಿಕಾರಿ (ಡಿಆರ್‌ಡಿಎ), ಗ್ರಾಮೀಣಾಭಿವೃದ್ಧಿ ಮಂತ್ರಾಲಯ, ಭಾರತ ಸರ್ಕಾರ, ಸಿ–21, 3ನೇ ಹಂತ, ಸ್ಟೇಟ್ ಎಂಪೋರಿಯ ಬಿಲ್ಡಿಂಗ್, ಬಾಬಾ ಖರಕ್‌ಸಿಂಗ್ ಮಾರ್ಗ, ನವದೆಹಲಿ–110 001.
4. ರಾಯಚೂರು ಜಿಲ್ಲಾ ಪಂಚಾಯತಿಯ ಅಧ್ಯಕ್ಷರಿಗೆ ಮಾಹಿತಿಗಾಗಿ
5. ರಾಯಚೂರು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮಾಹಿತಿಗಾಗಿ.
6. ರಾಯಚೂರು ಜಿಲ್ಲಾ ಪಂಚಾಯತಿಯ ಮುಖ್ಯಲೆಕ್ಕಾಧಿಕಾರಿಗಳಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
7. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ವಿವಿ ಟವರ್, ಬೆಂಗಳೂರು–560001.
8. ಉಪ ನಿರ್ದೇಶಕರು, ಖಜಾನೆ ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ನಂ.49, 2ನೇ ಮಹಡಿ, ಖನಿಜ ಭವನ (ಸರ್ಕಾರಿ ಬ್ಲಾಕ್) ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
9. ಜಿಲ್ಲಾ ಖಜಾನಾಧಿಕಾರಿಗಳು, ರಾಯಚೂರುರವರ ಮುಂದಿನ ಸೂಕ್ತ ಕ್ರಮಕ್ಕಾಗಿ
10. ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.

11. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-560 001.
12. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿ ಕಟ್ಟಡ, ಬೆಂಗಳೂರು.
13. ಸರ್ಕಾರದ ಕಾರ್ಯದರ್ಶಿಗಳು, (ವೆಚ್ಚ), ಆರ್ಥಿಕ ಇಲಾಖೆ, ವಿಧಾನಸೌಧ ರವರ ಆಪ್ತ ಕಾರ್ಯದರ್ಶಿಗಳಿಗೆ.
14. ಸರ್ಕಾರದ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳಿಗೆ.
15. ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇವರ ಆಪ್ತ ಕಾರ್ಯದರ್ಶಿಗಳಿಗೆ.
16. ಆಂತರಿಕ ಆರ್ಥಿಕ ಸಲಹೆಗಾರರು/ನಿರ್ದೇಶಕರು (ಪಿಎಂಐ), ಗ್ರಾಅಪಂರಾ ಇಲಾಖೆ
17. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಅಪಂರಾ ಇಲಾಖೆ.
18. ಶಾಖಾಧಿಕಾರಿ, ಪತ್ರ ಸ್ವೀಕಾರ ಮತ್ತು ರವಾನೆ ಶಾಖೆ, ಗ್ರಾ ಅ ಪಂರಾ ಇಲಾಖೆ
19. ಗಣಕ ಕೋಶ / ಹೆಚ್ಚಿನ ಪ್ರತಿ.

***